ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಪಿ.ಯು. ಕಾಲೇಜಿಗೆ ಅನುಮತಿ ಕೋರಿ ಬಂದಿರುವ ಪ್ರಸ್ತಾವನೆಗಳ ಬಗ್ಗೆ

ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

457 (483) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ 2018-19 ಹಾಗೂ 2019-20ನೇ ಸಾಲಿನಲ್ಲಿ ಪದವಿ ಪೂರ್ವ ಕಾಲೇಜಿಗೆ ಅನುಮತಿ ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು/ಜಿಲ್ಲಾವಾರು ವಿವರ ನೀಡುವುದು)

(ಆ) ಇದರಲ್ಲಿ ಇಲ್ಲಿಯವರೆಗೆ ಎಷ್ಟು ಕಾಲೇಜುಗಳಿಗೆ ಪ್ರವೇಶ ಅವಕಾಶ ನೀಡಲಾಗಿದೆ ; (ತಾಲ್ಲೂಕುವಾರು/ಜಿಲ್ಲಾವಾರು ವಿವರ ನೀಡುವುದು)

(ಇ) ಈಗಾಗಲೇ ಕಾರವಾರ ಜಿಲ್ಲೆಯ ಹಳಿಯಾಳ ತಾಲ್ಲೂಕಿನಿಂದ ಪದವಿ ಪೂರ್ವ ಕಾಲೇಜಿಗೆ ಪ್ರವೇಶ ಅವಕಾಶ ಕೋರಿ ಬಂದಿರುವ ಅರ್ಜಿಗಳಿಗೆ ಇಲ್ಲಿಯವರೆಗೆ ಪಿ.ಯು. ಬೋರ್ಡ್‌ರವರು ಸ್ಪಂದಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಾರಣವೇನು ;

(ಈ) ಈಗಾಗಲೇ ಸರ್ಕಾರ ವಿದ್ಯಾರ್ಥಿಗಳಿಗೆ ಸ್ಪಂದಿಸುವ ದೃಷ್ಠಿಯಿಂದ ವಿವಿಧ ತಾಲ್ಲೂಕುಗಳಲ್ಲಿ ಪದವಿ ಪೂರ್ವ ಕಾಲೇಜು ಸ್ಥಾಪನೆಗೆ ಅನುಮತಿ ನೀಡಲು ಆದೇಶ ಮಾಡಿದ್ದು, ಈ ಬಗ್ಗೆ ಪಿ.ಯು. ಬೋರ್ಡ್‌ರವರು ಅನಾವಶ್ಯಕವಾಗಿ ಅನುಮತಿ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ವಿದ್ಯಾರ್ಥಿಗಳ ಹಿತದೃಷ್ಠಿಯಿಂದ ಕೂಡಲೇ ಸಂಬಂಧಿಸಿದವರಿಗೆ ಕಾಲೇಜು ಪ್ರಾರಂಭಿಸಲು ಅನುಮತಿ ನೀಡಲಾಗುವುದೇ ? (ವಿವರ ನೀಡುವುದು)